# ಕರ್ನಾಟಕ ವಿಧಾನ ಪರಿಷತ್

| | |
|---|---|
| ಮಾನ್ಯ ಸದಸ್ಯರ ಹೆಸರು | ಶ್ರೀ ಎಂ.ನಾಗರಾಜು (ವಿಧಾನಸಭಾ ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1199 |
| ಉತ್ತರಿಸಬೇಕಾದ ದಿನಾಂಕ | 17.12.2025 |
| ಉತ್ತರಿಸಬೇಕಾದ ಸಚಿವರು | ವಸತಿ, ವಕ್ಫ್ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ವಸತಿ ಯೋಜನೆಗಳಲ್ಲಿ ಯೋಜನಾ ಅನುಮೋದನೆಗಳನ್ನು ಸರಳಗೊಳಿಸಲು ಅಭಿವೃದ್ಧಿ ಪಡಿಸಲಾಗುತ್ತಿರುವ Single window Clearance system ವ್ಯವಸ್ಥೆ ಎಷ್ಟು ಪರಿಣಾಮಕಾರಿಯಾಗಿದೆ; | ರಾಜೀವ್ ಗಾಂಧಿ ವಸತಿ ನಿಗಮದಿಂದ ಅನುಷ್ಠಾನಗೊಂಡಿರುವ "1 ಲಕ್ಷ ಬಹುಮಹಡಿ ಬೆಂಗಳೂರು ವಸತಿ ಯೋಜನೆ"ಗೆ ಸಂಬಂಧಿಸಿದಂತೆ, ಯೋಜನೆ ಅನುಷ್ಠಾನ ಸರಳೀಕರಣಗೊಳಿಸಲು ವಸತಿ ಇಲಾಖೆಯ ಪ್ರಧಾನ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ರಾಜ್ಯ ಮಟ್ಟದ ಮೌಲ್ಯಮಾಪನ ಸಮಿತಿ (SLAC) ಮತ್ತು ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ರಾಜ್ಯ ಮಟ್ಟದ ಅನುಮೋದನೆ ಮತ್ತು ಮೇಲ್ವಿಚಾರಣೆ ಸಮಿತಿಗಳನ್ನು (SLSMC) ರಚಿಸಿದ್ದು, ಸಮಿತಿಗಳ ಮುಖೇನ ಯೋಜನೆಯ ಪ್ರಸ್ತಾವನೆಗಳಿಗೆ ಅನುಮೋದನೆ ಪಡೆದು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗುತ್ತಿದೆ. |
| ಆ) | ಕೈಗೆಟಕುವ ವಸತಿ ಯೋಜನೆಗಳಲ್ಲಿ ಸಾರ್ವಜನಿಕ ಮತ್ತು ಖಾಸಗಿ ವಲಯ ಅಭಿವರ್ಧಕರನ್ನು (Developers) ಪ್ರೋತ್ಸಾಹಿಸಲು ಸರ್ಕಾರವು ಹೆಚ್ಚುವರಿ ನೆಲದ ವಿಸ್ತೀರ್ಣ ಅನುಪಾತ (Additional Floor Area Ratio) ಪ್ರಯೋಜನೆಗಳನ್ನು ನೀಡಲು ಮುಂದಾಗಿದೆಯೇ; | ರಾಜೀವ್ ಗಾಂಧಿ ವಸತಿ ನಿಗಮದಿಂದ ಅನುಷ್ಠಾನಗೊಂಡಿರುವ "1 ಲಕ್ಷ ಬಹುಮಹಡಿ ಬೆಂಗಳೂರು ವಸತಿ ಯೋಜನೆ"ಯಡಿಯಿಂದ PPP Model ನಿರ್ವಹಿಸಲು ಕ್ರಮವಹಿಸಲಾಗಿದ್ದು, IDeck ಸಂಸ್ಥೆಯಿಂದ ತಾಂತ್ರಿಕ ಸಲಹೆಗಾರರಾಗಿ ನಿಯೋಜಿಸಿಕೊಳ್ಳಲಾಗಿದೆ.<br><br>ಪ್ರಾಯೋಗಿಕವಾಗಿ ಹುಣಸಮಾರಣಹಳ್ಳಿ ಜಮೀನಿನಲ್ಲಿ PPP ಮಾದರಿಯ ಯೋಜನೆಯಡಿ ವಸತಿ ಯೋಜನೆ ನಿರ್ವಹಿಸಲು Concept Plan ಸಿದ್ಧಪಡಿಸಲಾಗಿದ್ದು, ವಿವರವಾದ ಯೋಜನಾ ವರದಿ ಸಿದ್ಧಪಡಿಸಲು ಒಡಂಬಡಿಕೆ ಮಾಡಿಕೊಳ್ಳಲು ಕ್ರಮವಹಿಸಲಾಗುತ್ತದೆ. |
| ಇ) | ಅಲ್ಪಸಂಖ್ಯಾತರಿಗೆ ವಸತಿ ಯೋಜನೆಗಳಲ್ಲಿ ಮೀಸಲಾತಿ ಕೋಟಾಗಳನ್ನು ಸರ್ಕಾರ ಹೇಗೆ ನಿರ್ವಹಿಸುತ್ತಿದೆ; ಮತ್ತು ಅಲ್ಪಸಂಖ್ಯಾತರಿಗೆ ಮೀಸಲಾತಿ ಶೇ.10 ರಿಂದ ಶೇ.15 ರಷ್ಟು ಹೆಚ್ಚಿಸಿದ ನಂತರ ವಸತಿ ಯೋಜನೆಗಳ ಅನುಷ್ಠಾನದ ಪ್ರಸ್ತುತ ಸ್ಥಿತಿ ಏನು? (ಮಾಹಿತಿ ನೀಡುವುದು) | ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತದಿಂದ ಅನುಷ್ಠಾನಗೊಂಡಿರುವ "1 ಲಕ್ಷ ಬಹುಮಹಡಿ ಬೆಂಗಳೂರು ವಸತಿ ಯೋಜನೆ"ಗೆ ಸಂಭಂಧಿಸಿದಂತೆ, ಅಲ್ಪ ಸಂಖ್ಯಾತರಿಗೆ ಶೇ.10 ರಷ್ಟು ಮೀಸಲಿಡಲಾಗಿದೆ.<br><br>ರಾಜ್ಯಾದ್ಯಂತ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ವಸತಿ ಇಲಾಖೆಯಿಂದ ಅನುಷ್ಠಾನಗೊಳಿಸಲಾಗುವ ವಿವಿಧ ವಸತಿ ಯೋಜನೆಗಳಡಿ ನಿಗಧಿಪಡಿಸುವ ಗುರಿಯಲ್ಲಿ ಅಲ್ಪಸಂಖ್ಯಾತ ಸಮುದಾಯದವರಿಗೆ ನಿಗಧಿಪಡಿಸಿರುವ ಶೇಕಡ 10ರ ಮೀಸಲಾತಿಯನ್ನು ಶೇಕಡ 15ಕ್ಕೆ ಹೆಚ್ಚಿಸಲಾಗಿರುತ್ತದೆ.<br><br>2025-26ನೇ ಸಾಲಿಗೆ ವಸತಿ ಯೋಜನೆಗಳಡಿ ಆಯವ್ಯಯದಲ್ಲಿ ಯಾವುದೇ ಹೊಸ ಮನೆಗಳ ಹಂಚಿಕೆಯ ಪ್ರಸ್ತಾವನೆ ಆಗಿರುವುದಿಲ್ಲ. |

ಸಂಖ್ಯೆ: ವಇ 196 ಹೆಚ್‌ಎಫ್‌ಎ 2025]

(ಬಿ.ಝೆಡ್. ಜಮೀರ್ ಅಹಮದ್ ಖಾನ್)
ವಸತಿ, ವಕ್ಫ್, ಮತ್ತು ಅಲ್ಪ ಸಂಖ್ಯಾತರ
ಕಲ್ಯಾಣ ಸಚಿವರು.

Scanned with OKEN Scanner